# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2211
ಸದಸ್ಯರ ಹೆಸರು : ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ
ಉತ್ತರಿಸುವ ಸಚಿವರು : ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು
ಉತ್ತರಿಸುವ ದಿನಾಂಕ : 26.03.2021

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕೆ.ಎಸ್.ಆರ್.ಟಿ.ಸಿ. ಬಸ್ ನಿಲ್ದಾಣದ ಶೌಚಾಲಯಗಳಲ್ಲಿ ಹಣಪಾವತಿ ವಿವರವನ್ನು ಕಡ್ಡಾಯವಾಗಿ ನಾಮಫಲಕ ಅಳವಡಿಸುವ ಮುಖಾಂತರ ಪ್ರಯಾಣಿಕರಿಗೆ ತಿಳಿಸಲಾಗುವುದೇ; ಇಲ್ಲವಾದಲ್ಲಿ, ಬೇಕಾಬಿಟ್ಟಿಯಾಗಿ ಹಣವಸೂಲಿ ಮಾಡುವ ದಂಧೆಗೆ ಸರ್ಕಾರವೇ ಅವಕಾಶ ಮಾಡಿಕೊಟ್ಟಾಂತಾಗುವುದಿಲ್ಲವೇ; | ಕೆ.ಎಸ್.ಆರ್.ಟಿ.ಸಿ., ಬಸ್ ನಿಲ್ದಾಣದ ಶೌಚಾಲಯಗಳಲ್ಲಿ ಹಣಪಾವತಿ ವಿವರವನ್ನು ಕಡ್ಡಾಯವಾಗಿ ನಾಮಫಲಕ ಅಳವಡಿಸುವ ಮುಖಾಂತರ ಪ್ರಯಾಣಿಕರಿಗೆ ತಿಳಿಸಲಾಗುತ್ತಿದೆ.<br>ಕೆ.ಎಸ್.ಆರ್.ಟಿ.ಸಿ. ಬಸ್ ನಿಲ್ದಾಣದ ಶೌಚಾಲಯಗಳಲ್ಲಿ ಮೂತ್ರಾಲಯ ಬಳಕೆ ಉಚಿತ ಹಾಗೂ ಶೌಚಾಲಯ ಬಳಕೆಗೆ ದರವನ್ನು ನಿಗದಿಪಡಿಸಿರುವ ಸಂಬಂಧ ವಿವರವನ್ನು ದಪ್ಪಕ್ಷರಗಳಲ್ಲಿ ಬರೆಯಿಸಿ, ಕಡ್ಡಾಯವಾಗಿ ನಾಮಫಲಕ ಅಳವಡಿಸಲಾಗಿದೆ. |
| ಆ) | ಕೆಲವು ಕಡೆಗಳಲ್ಲಿ ಉದ್ದೇಶಪೂರ್ವಕವಾಗಿ ಹಣಪಾವತಿ ವಿವರಗಳನ್ನು ಅಳಿಸಿ ಹಾಕುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಕೈಗೊಂಡಿರುವ ಕ್ರಮಗಳಾವುವು; | ಕೆ.ಎಸ್.ಆರ್.ಟಿ.ಸಿ. ಬಸ್ ನಿಲ್ದಾಣದ ಶೌಚಾಲಯಗಳಲ್ಲಿ ಉದ್ದೇಶಪೂರ್ವಕವಾಗಿ ಹಣಪಾವತಿ ವಿವರವನ್ನು ಅಳಿಸಿ ಹಾಕಿರುವ ಅಂಶವು ನಿಗಮದ ಗಮನಕ್ಕೆ ಬಂದಲ್ಲಿ, ಕೂಡಲೇ ದರಗಳ ಮಾಹಿತಿಯನ್ನು ಪ್ರದರ್ಶಿಸಲು ಕ್ರಮ ವಹಿಸಲಾಗುವುದು ಹಾಗೂ ಈ ಕುರಿತು ನಿರ್ದಿಷ್ಟ ದೂರುಗಳು ಸ್ವೀಕಾರವಾದಲ್ಲಿ, ಸ್ವಚ್ಛತಾ ಗುತ್ತಿಗೆದಾರರಿಗೆ ಕರಾರು ನಿಯಮಾನುಸಾರ ದಂಡ ವಿಧಿಸಲು ಕ್ರಮ ವಹಿಸಲಾಗಿದೆ. |
| ಇ) | ಶೌಚಾಲಯಗಳಲ್ಲಿ ಚಿಲ್ಲರೆ ಕೊರತೆಯಿಂದ ಅನಾವಶ್ಯಕವಾಗಿ ಪ್ರಯಾಣಿಕರು ಕಿರುಕುಳ ಅನುಭವಿಸುತ್ತಿರುವ ಹಿನ್ನೆಲೆಯಲ್ಲಿ Prepaid card ವ್ಯವಸ್ಥೆಯನ್ನು ಜಾರಿಗೆ ತರಲು ಇಲಾಖೆ ಕ್ರಮ ತೆಗೆದುಕೊಳ್ಳುವುದೇ; ಇಲ್ಲವಾದಲ್ಲಿ ಕಾರಣಗಳೇನು? | ಕೆ.ಎಸ್.ಆರ್.ಟಿ.ಸಿ. ವ್ಯಾಪ್ತಿಯ ಬಸ್ ನಿಲ್ದಾಣಗಳಲ್ಲಿ, ಬಹುತೇಕ ತಾಲ್ಲೂಕು/ಹೋಬಳಿ ಮತ್ತು ಗ್ರಾಮಾಂತರ ಬಸ್ ನಿಲ್ದಾಣಗಳಾಗಿರುತ್ತವೆ. ಗ್ರಾಮಾಂತರ ವ್ಯಾಪ್ತಿಯ ಸಾರ್ವಜನಿಕ ಪ್ರಯಾಣಿಕರ ದೃಷ್ಟಿಯಿಂದ ಶೌಚಾಲಯಗಳಲ್ಲಿ ಹಣ ಪ್ಪಾವತಿಯ ಕುರಿತು Prepaid card ವ್ಯವಸ್ಥೆಯನ್ನು ಜಾರಿಗೆ ತರುವ ಪ್ರಸ್ತಾವನೆಯು ಪ್ರಸ್ತುತ ಇರುವುದಿಲ್ಲ. |

ಸಂಖ್ಯೆ: ಟಿಡಿ 165 ಟಿಸಿಕ್ಯೂ 2021

(ಲಕ್ಷ್ಮಣ ಸಂಗಪ್ಪ ಸವದಿ)
ಉಪ ಮುಖ್ಯಮಂತ್ರಿಗಳು ಹಾಗೂ
ಸಾರಿಗೆ ಸಚಿವರು